10. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀ ರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.
11. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.
12. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 562 ವೈದ್ಯರ ಹಾಗೂ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.
13. ಪ್ರಸ್ತುತ ಗ್ರೂಪ್-ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.

ಅಂಗನವಾಡಿ ಶಿಕ್ಷಕಿಯರನ್ನು ಖಾಯಂಗೊಳಿಸುವುದು

840 (1029) ಶ್ರೀ ಬೆಳ್ಳುಳ್ಳಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಂಗನವಾಡಿ ಶಿಕ್ಷಕಿಯರು ಹಾಗೂ ಕಾರ್ಯಕರ್ತೆಯರುಗಳನ್ನು ಖಾಯಂಗೊಳಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಪಿ.ಎಂ.ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.